## ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಮಾನ್ಯ ಸದಸ್ಯರ ಹೆಸರು | : | ಶ್ರೀ ಸಿ.ಆರ್. ಮನೋಹರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | **1237** |
| ಉತ್ತರಿಸಬೇಕಾದ ದಿನಾಂಕ | : | 30.09.2020 |
| ಉತ್ತರಿಸಬೇಕಾದ ಸಚಿವರು | : | ವಸತಿ ಸಚಿವರು |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| (ಅ) | ಕೋಲಾರ ಮತ್ತು ಚಿಕ್ಕಬಳ್ಳಾಪುರ ಜಿಲ್ಲೆಯಲ್ಲಿ 2017-18 ರಿಂದ 2020-21ರ ಸಾಲಿನಲ್ಲಿ ಬಸವ ವಸತಿ ಯೋಜನೆಯಡಿಯಲ್ಲಿ ಮಂಜೂರು ಮಾಡಲಾದ ಮನೆಗಳ ಸಂಖ್ಯೆ ಎಷ್ಟು; | 2017-18 ಮತ್ತು 2018-19 ರ ಸಾಲಿನವರೆಗೆ ಬಸವ ವಸತಿ ಯೋಜನೆಯಡಿ ಕೋಲಾರ ಜಿಲ್ಲೆಗೆ 11970 ಮನೆಗಳನ್ನು ಮತ್ತು ಚಿಕ್ಕಬಳ್ಳಾಪುರ ಜಿಲ್ಲೆಗೆ 7438 ಮನೆಗಳನ್ನು ಮಂಜೂರು ಮಾಡಲಾಗಿದೆ.<br>2019-20 ಹಾಗೂ 2020-21 ನೇ ಸಾಲಿನಲ್ಲಿ ಬಸವ ವಸತಿ ಯೋಜನೆಯಡಿ ಯಾವುದೇ ಮನೆಗಳ ಗುರಿಯನ್ನು ನೀಡಿರುವುದಿಲ್ಲ. |
| (ಆ) | ಎಷ್ಟು ಮನೆಗಳು ಪೂರ್ಣಗೊಂಡಿವೆ; | ಕೋಲಾರ ಜಿಲ್ಲೆಗೆ ಮಂಜೂರಾದ 11970 ಮನೆಗಳ ಪೈಕಿ 5152 ಮನೆಗಳು ಮತ್ತು ಚಿಕ್ಕಬಳ್ಳಾಪುರ ಜಿಲ್ಲೆಗೆ ಮಂಜೂರಾದ 7438 ಮನೆಗಳ ಪೈಕಿ 3053 ಮನೆಗಳು ಪೂರ್ಣಗೊಂಡಿವೆ. |
| (ಇ) | ಬಿಡುಗಡೆ ಮಾಡಲಾದ ಅನುದಾನ ಎಷ್ಟು; ಬಾಕಿ ಎಷ್ಟು ಅನುದಾನವನ್ನು ಬಿಡುಗಡೆ ಮಾಡಬೇಕಾಗಿದೆ ? (ಕ್ಷೇತ್ರವಾರು, ವರ್ಷವಾರು, ಜಾತಿವಾರು, ಸಮುದಾಯವಾರು ವಿವರ ನೀಡುವುದು) | 2017-18 ಸಾಲಿನಲ್ಲಿ ಕೋಲಾರ ಮತ್ತು ಚಿಕ್ಕಬಳ್ಳಾಪುರ ಜಿಲ್ಲೆಯಲ್ಲಿ ಬಸವ ವಸತಿ ಯೋಜನೆಯಡಿ ಮಂಜೂರು ಮಾಡಲಾದ ಮನೆಗಳ ಪೈಕಿ 12,683 ಅರ್ಹ ಫಲಾನುಭವಿಗಳಿಗೆ ಜಿಪಿಎಸ್ ಆಧಾರಿತ ಪ್ರಗತಿಯನ್ವಯ ರೂ.111.22 ಕೋಟಿಗಳನ್ನು ಬಿಡುಗಡೆ ಮಾಡಲಾಗಿದೆ. ವಿವಿಧ ಹಂತದ ಪ್ರಗತಿಯಲ್ಲಿರುವ 4,497 ಮನೆಗಳಿಗೆ ರೂ.21.44 ಕೋಟಿ ಅನುದಾನವನ್ನು ಬಿಡುಗಡೆ ಮಾಡಬೇಕಾಗಿದ್ದು, ವಿವಿಧ ವಸತಿ ಯೋಜನೆಗಳಡಿ ಪ್ರಗತಿಯಲ್ಲಿರುವ ಮನೆಗಳನ್ನು ಇಂದಿರಾ ಮನೆ ಮೊಬೈಲ್ ಆಪ್ ಮೂಲಕ ಜಿ.ಪಿ.ಎಸ್ ಗೆ ಅಳವಡಿಸಿ ಅರ್ಹಗೊಂಡ ನಂತರ ಮತ್ತೊಮ್ಮೆ Geo ಆಧಾರಿತ Vigil App ಮೂಲಕ ಜಿಲ್ಲಾ ಪಂಚಾಯತಿ ಮುಖ್ಯ ಕಾರ್ಯ ನಿರ್ವಹಣಾಧಿಕಾರಿಯವರು ಪರಿಶೀಲಿಸಿ, ಅರ್ಹಗೊಂಡ ಮನೆಗಳಿಗೆ ಆಧಾರ್ ಜೋಡನೆಯಾದ ಅರ್ಹ ಫಲಾನುಭವಿಗಳ ಬ್ಯಾಂಕ್ ಖಾತೆಗಳಿಗೆ ಮಾತ್ರ ಅನುದಾನ ಬಿಡುಗಡೆ ಮಾಡಲಾಗುತ್ತಿರುವುದರಿಂದ ಪ್ರಸ್ತುತ ಪರಿಶೀಲಿಸಲ್ಪಟ್ಟ 303 ಅರ್ಹ ಫಲಾನುಭವಿಗಳಿಗೆ ರೂ.2.04 ಕೋಟಿ ಅನುದಾನ ಬಿಡುಗಡೆ ಮಾಡಲು ಬಾಕಿ ಇದ್ದು, ಸದರಿ ಫಲಾನುಭವಿಗಳಿಗೆ Vigil App ಮೂಲಕ ಪರಿಶೀಲನೆಗೆ ಜಿಲ್ಲಾ ಹಂತದಲ್ಲಿ ಬಾಕಿ ಇದ್ದು, ಪರಿಶೀಲಿಸಿ ಅನುಮೋದಿಸಿದ ನಂತರ ಪ್ರಗತಿಗೆ ಅನುಗುಣವಾಗಿ ಅನುದಾನ ಬಿಡುಗಡೆ ಕ್ರಮ ವಹಿಸಲಾಗುವುದು. ಇನ್ನುಳಿದಂತೆ ಅರ್ಹ ಫಲಾನುಭವಿಗಳಿಗೆ ಅನುದಾನ ಬಾಕಿ ಇರುವುದಿಲ್ಲ. |

ಸಂಖ್ಯೆ :ವಇ 337 ಹೆಚ್‌ಎಂ 2020

**(ವಿ. ಸೋಮಣ್ಣ)**
ವಸತಿ ಸಚಿವರು.